**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಮರಿತಿಬ್ಬೇಗೌಡ ರವರು ನಿಯಮ-72 ರಡಿಯಲ್ಲಿ ಗಮನಸೆಳೆಯುವ ಸೂಚನೆಗೆ ಉತ್ತರ ಸಲ್ಲಿಸುವ ಬಗ್ಗೆ.**

**ಪ್ರಶ್ನೆ:**

ಕಾನೂನು ಮಾಪನಶಾಸ್ತ್ರ ಇಲಾಖೆಯಲ್ಲಿ ಬೆಂಗಳೂರು ನಗರದಲ್ಲಿಯೆ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಕೆಲವು ಸಹಾಯಕ ನಿಯಂತ್ರಕರು ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿ ನಿರ್ಲಕ್ಷ್ಯ ಧೋರಣೆ ಮತ್ತು ಕರ್ತವ್ಯ ಲೋಪವೆಸಗಿ ವರ್ತಕರಿಗೆ ವಿನಾಕಾರಣ ಕಿರುಕುಳ ನೀಡುತ್ತಿರುವ ಬಗ್ಗೆ ವರ್ತಕರು ಹಲವಾರು ಬಾರಿ ದೂರುಗಳನ್ನು ನೀಡಿದ ಸಂಬಂಧ ಸರ್ಕಾರವು ವಿಚಾರಣಾ ಸಮಿತಿಯನ್ನು ರಚಿಸಿದ್ದು, ಸಮಿತಿಯಲ್ಲಿ ಸದರಿ ಅಧಿಕಾರಿಗಳ ಮೇಲೆ ಆರೋಪಗಳು ಸಾಭೀತಾಗಿದ್ದರೂ ಸಹ ಸರ್ಕಾರದ ಹಂತದಲ್ಲಿ ಕ್ರಮ ಕೈಗೊಳ್ಳದೆ ಪ್ರಕರಣವನ್ನು ಮುಚ್ಚಿಹಾಕಲು ಪ್ರಯತ್ನಿಸುತ್ತಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರ ಗಮನ ಸೆಳೆಯ ಬಯಸುತ್ತೇನೆ.

**ಉತ್ತರ:-**

**ಕಾನೂನು ಮಾಪನಶಾಸ್ತ್ರ ಇಲಾಖೆಯಲ್ಲಿ ಬೆಂಗಳೂರು ನಗರದಲ್ಲಿಯೇ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಕೆಲವು ಸಹಾಯಕ ನಿಯಂತ್ರಕರು ವ್ಯಾಪಕ ಭ್ರಷ್ಟಾಚಾರದಲ್ಲಿ ತೊಡಗಿ, ನಿರ್ಲಕ್ಷ್ಯ ಧೋರಣೆ ಮತ್ತು ಕರ್ತವ್ಯ ಲೋಪವೆಸಗಿ ವರ್ತಕರಿಗೆ ವಿನಾಕಾರಣ ಕಿರುಕುಳ ನೀಡುತ್ತಿರುವ ಬಗ್ಗೆ ದೂರುಗಳ ಸಂಬಂಧ ಸರ್ಕಾರದ ಹಂತದಲ್ಲಿ ಯಾವುದೇ ವಿಚಾರಣಾ ಸಮಿತಿಯನ್ನು ರಚಿಸಿರುವುದಿಲ್ಲ. ಆದರೆ, ನಿಯಂತ್ರಕರು, ಕಾನೂನು ಮಾಪನಶಾಸ್ತ್ರ ಇಲಾಖೆ ಇವರ ಹಂತದಲ್ಲಿ ಅಧ್ಯಕ್ಷರು, ಭಾರತ ಪೆಟ್ರೋಲಿಯಂ ಡೀಲರ್ ಅಸೋಸಿಯೆಷನ್ ಇವರು ಸಹಾಯಕ ನಿಯಂತ್ರಕರು, 2ನೇ ವೃತ್ತ, ಬೆಂಗಳೂರು ಇವರ ವಿರುದ್ಧ ದೂರು ನೀಡಿರುವ ಬಗ್ಗೆ ಮೂರು ಹಿರಿಯ ಅಧಿಕಾರಿಗಳ ತಂಡವನ್ನು ರಚಿಸಲಾಗಿರುತ್ತದೆ. ದೂರಿನ ಸಂಬಂಧ ತನಿಖಾ ತಂಡ ನೀಡಿದ ವರದಿಯನ್ನು ಒಪ್ಪಲು ಸಾಧ್ಯವಾಗಿರುವುದಿಲ್ಲ ಎಂದು ನಿಯಂತ್ರಕರು ಪತ್ರ ಸಂಖ್ಯೆ: ಕಾಮಾಇ/ಸಿಬ್ಬಂದಿ-1/ಸಿಆರ್-146/2022-23, ದಿನಾಂಕ: 19-06-2023ರಲ್ಲಿ ಸರ್ಕಾರಕ್ಕೆ ಪತ್ರ ಮುಖೇನ ತಿಳಿಸಿರುತ್ತಾರೆ.**

ಸರ್ಕಾರ ಅಧಿಸೂಚನೆ ಸಂಖ್ಯೆ: ಅನಾಸ/135/ಕಾಮಾಸೇ/2022, ದಿನಾಂಕ: 09-08-2023ರಲ್ಲಿ ಬೆಂಗಳೂರು ಪೆಟ್ರೋಲಿಯಂ ಡೀಲರ್ಸ್ ಅಸೋಸಿಯೇಷನ್ ಇವರು ನೀಡಿದ ದೂರಿಗೆ ಸಂಬಂಧಿಸಿದ ಮರು ತನಿಖೆ ನಡೆಸಲು ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರನ್ನು ವಿಚಾರಣಾ ಅಧಿಕಾರಿಯಾಗಿ ನೇಮಕ ಮಾಡಿಲಾಗಿರುತ್ತದೆ. ಆಯುಕ್ತರು, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಇವರು ದೂರಿನ ಸಂಬಂಧ ವಿಚಾರಣೆ ನಡೆಸಿ ಪತ್ರ ಸಂಖ್ಯೆ: ಕೆ.ಎಸ್.ಡಿ.ಸಿ/ಕೌಮಿ/ಅ/ವಿವಾ-15/2023-24, ದಿನಾಂಕ: 16-01-2024ರಲ್ಲಿ ತನಿಖಾ ವರದಿಯು ದಿನಾಂಕ: 13-02-2024ಕ್ಕೆ ಸರ್ಕಾರಕ್ಕೆ ಸ್ವೀಕೃತವಾಗಿರುತ್ತದೆ. ಈ ವರದಿಯನ್ನು ಪರಿಶೀಲಿಸಲಾಗುತ್ತಿದೆ.

ಇಲಾಖೆಯನ್ನು ಸುಧಾರಣೆ ಮಾಡಲು ಹಲವು ಕ್ರಮಗಳನ್ನು ಕೈಗೊಳ್ಳಲಾಗಿದೆ. ಭ್ರಷ್ಟಚಾರ ತಡೆಯಲು ನಿರ್ದೇಶನ ನೀಡಿದ್ದು, 2022-23ನೇ ಸಾಲಿನಲ್ಲಿ ರೂ. 63.00 ಕೋಟಿಯಿಂದ ಶುಲ್ಕ ಸಂಗ್ರಹವನ್ನು 2023-24ನೇ ಸಾಲಿನಲ್ಲಿ ರೂ. 100.00 ಕೋಟಿ ಸಂಗ್ರ ಗುರಿ ಹೊಂದಲಾಗಿದೆ. ಜನವರಿ-2024ರ ಅಂತ್ಯಕ್ಕೆ ರೂ. 65.00 ಕೋಟಿ ರಾಜಸ್ವ ಸಂಗ್ರಹಿಸಲಾಗಿದೆ.

ಗ್ರಾಹಕರಿಗೆ ಆಗುವ ಮೋಸ ತಡೆಯಲು ಕ್ಷಿಪ್ರ ತಪಾಸಣೆ ಮಾಡಲು "ಗ್ರಾಹಕ ರಕ್ಷಕ" ತಪಾಸಣಾ ವಾಹನವನ್ನು ನೀಡಲಾಗುತ್ತಿದೆ. ಇಲಾಖೆಯನ್ನು ಪುನರಚನೆ ಮಾಡಲಾಗಿದೆ. ಅಗತ್ಯ ಸಿಬ್ಬಂದಿ ನೇಮಿಸುವುದು ಸೇರಿದಂತೆ ಗ್ರಾಹಕರ ಹಕ್ಕುಗಳ ಬಗ್ಗೆ ಜಾಗೃತಿ ಮೂಡಿಸಿ, ಕಾನೂನು ಮಾಪನಶಾಸ್ತ್ರ ಇಲಾಖೆಯನ್ನು ಸುಧಾರಣೆ ಮಾಡಿ, ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ಸರ್ಕಾರ ಎಲ್ಲಾ ರೀತಿಯ ಕ್ರಮ ಕೈಗೊಳ್ಳಲಾಗುತ್ತಿದೆ.

(ಕೆ.ಹೆಚ್. ಮುನಿಯಪ್ಪ)
ಆಹಾರ, ನಾಗರಿಕ ಸರಬರಾಜು ಮತ್ತು
ಗ್ರಾಹಕರ ವ್ಯವಹಾರಗಳ ಸಚಿವರು